# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಕೋರಮಂಗಲ ಉಪ-ವಿಭಾಗದ ಜಕ್ಕಸಂದ್ರ ವಾರ್ಡ್ ಸಂಖ್ಯೆ-173 ದಿನಾಂಕ: 21-08-2021 ರಂದು**
**ಆಗಸ್ಟ್-2021 ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು**

ಶ್ರೀ ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173ರ ರವರ ಅಧ್ಯಕ್ಷತೆಯಲ್ಲಿ ಗ್ರಂಥಾಲಯ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಸೆಕ್ಟರ್, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು ದಿನಾಂಕ: 21.08.2021 ರಂದು ಬೆಳಗ್ಗೆ 11.30 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದವರು:-**

1. ಶ್ರೀ ಎಲ್.ವಿ. ಹೆನ್ರಿ
2. ಶ್ರೀ ಸತೀಶ್ ಕುಮಾರ್
3. ಶ್ರೀ ಪ್ರವೀಣ್
4. ಶ್ರೀಮತಿ ಸು. ಕುಸುಮ
5. ಶ್ರೀ ಎಂ.ಕೆ.ಎನ್. ಆಚಾರ್ಯ
6. ಶ್ರೀಮತಿ ಸರಸ್ವತಮ್ಮ
7. ಶ್ರೀ ಶ್ರೀನಿವಾಸ ಹೊಳ್ಳ .ಜಿ
8. ಶ್ರೀಮತಿ ಪ್ರೇಮಕುಮಾರಿ
9. ಪ್ರೇಮ ಮಂಜುನಾಥ್ .ವಿ.ಎ

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಪ್ರದೀಪ್ ಕುಮಾರ್, ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-173 ಜಕ್ಕಸಂದ್ರ
2. ಶ್ರೀ ಸಿ. ನರಸಿಂಹಯ್ಯ
3. ಶ್ರೀ ಜನಾರ್ಧನ .ಬಿ, ಬೆಸ್ಕಾಂ
4. ಶ್ರೀ ಈಶ್ವರಯ್ಯ .ಸಿ
5. ಶ್ರೀ ಸಿ.ಎನ್. ಶಂಕರೇಗೌಡ
6. ಶ್ರೀ ಎಂ.ಟಿ. ರಾಮಯ್ಯ

* * * * *

ಶ್ರೀ ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173 ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಶ್ರೀ ಶ್ರೀನಿವಾಸ ಹೊಳ್ಳ ರವರು ಮಾತನಾಡಿ, 11ನೇ ಮುಖ್ಯರಸ್ತೆಯು ಡಾಂಬರೀಕರಣ ಕಾಮಗಾರಿಯು ಬಹಳ ವರ್ಷದಿಂದ ಬಾಕಿ ಉಳಿದಿದ್ದು, ಇದರ ಬಗ್ಗೆ ಸೂಕ್ತ ಕ್ರಮ ಕೈಗೊಂಡು ಕಾಮಗಾರಿಯನ್ನು ತ್ವರಿತಗತಿಯಲ್ಲಿ ನಿರ್ವಹಿಸಿ, ಪೂರ್ಣಗೊಳಿಸುವಂತೆ ಮನವಿ ಮಾಡಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಕೋರಮಮಗಲ ಉಪವಿಭಾಗ**

ಶ್ರೀ ಆಚಾರ್ಯರವರು ಮಾತನಾಡಿ, 14ನೇ ಮುಖ್ಯರಸ್ತೆಯಲ್ಲಿ ಬೃಹತ್ ಮಳೆನೀರು ಚರಂಡಿ ವತಿಯಿಂದ ಸುಮಾರು 3/4 ವರ್ಷಗಳ ಹಿಂದೆ ನಿರ್ಮಾಣ ಮಾಡಿದ್ದ ಮಳೆ ನೀರು ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯದೆ, ನೀರು ನಿಂತಿದ್ದು, ಇದರಿಂದ ದುರ್ವಾಸನೆ ಬರುತ್ತಿದ್ದು, ಅಕ್ಕಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿರುತ್ತದೆ ಈ ಬಗ್ಗೆ ಕ್ರಮವಹಿಸಲು ಸಂಬಂಧಪಟ್ಟ ಸ.ಕಾ.ನಿ.ಅ(ಎಸ್.ಡಬ್ಲ್ಯೂ.ಡಿ) ರವರಿಗೆ ಸಮಿತಿ ವತಿಯಿಂದ ಸೂಚಿಸಲಾಯಿತು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಬೃಹತ್ ಮಳೆನೀರುಗಾಲುವೆ**

ಡಾ॥ ವಿವೇಕ್ ರವರು ಮಾತನಾಡಿ, 14ನೇ ಮುಖ್ಯರಸ್ತೆಯನ್ನು ಸಂಪೂರ್ಣವಾಗಿ ಡಾಂಬರೀಕರಣ ಮಾಡಿದ್ದು, ರಸ್ತೆಯ ಎಡಬಲಗಳಲ್ಲಿ ಆಗ್ಗಿಂದಾಗ್ಗೆ ವಾಹನಗಳನ್ನು ನಿಲ್ಲಿಸುತ್ತಿರುವುದರಿಂದ ವಾಹನಗಳ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ. ಆದುದರಿಂದ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಕೋರಿದರು.

**ಕ್ರಮ: ಆರಕ್ಷಕ ನಿರೀಕ್ಷಕರು,**
**ಹೆಚ್.ಎಸ್.ಆರ್. ಪೊಲೀಸ್ ಠಾಣೆ (ಸಂಚಾರ ವಿಭಾಗ)**

ಹೆಚ್.ಎಸ್.ಆರ್. 5ನೇ ಸೆಕ್ಟರ್‌ನಲ್ಲಿರುವ 14ನೇ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳು ಹದಗೆಟ್ಟಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದುದರಿಂದ ಇವುಗಳನ್ನು ಸರಿಪಡಿಸುವಂತೆ ಸಭೆಯ ಗಮನಕ್ಕೆ ತಂದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**(ವಿದ್ಯುತ್ ವಿಭಾಗ), ಬಿ.ಬಿ.ಎಂ.ಪಿ.**

ಹೆಚ್.ಎಸ್.ಆರ್. 5ನೇ ಸೆಕ್ಟರ್‌ನಲ್ಲಿರುವ 13ನೇ ಮುಖ್ಯರಸ್ತೆ, ಗ್ರೀನ್ ವ್ಯೂಹ್ ಹಾಸ್ಪಿಟಲ್ ಹಿಂಭಾಗ, ವೆಂಕಟಾಪುರ ಸ್ಮಶಾನದ ಮೂಲೆಯಲ್ಲಿ ಸಾರ್ವಜನಿಕರು ಹಾಗೂ ಸ್ಥಳೀಯ ನಿವಾಸಿಗಳು ದಿನನಿತ್ಯ ಕಸಗಳನ್ನು ಸುರಿಯುತ್ತಿದ್ದು, ಇದನ್ನು ತಡೆಗಟ್ಟುವಂತೆ ಸೂಕ್ತ ಕ್ರಮ ಕೈಗೊಳ್ಳಲು ಘನತ್ಯಾಜ್ಯ ವಿಭಾಗ ರವರಿಗೆ ಸೂಚಿಸುವಂತೆ ಸಭೆಯಲ್ಲಿ ಕೋರಲಾಯಿತು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**(ಘನತ್ಯಾಜ್ಯ ವಿಭಾಗ), ಬಿ.ಟಿ.ಎಂ. ಲೇಔಟ್ ವಿಭಾಗ**

ಶ್ರೀಮತಿ ಕುಸುಮ ರವರು ಮಾತನಾಡಿ, ಹೆಚ್.ಎಸ್.ಆರ್. ಬಡಾವಣೆ, 13ನೇ ಮುಖ್ಯರಸ್ತೆಯ ಗ್ರೀನ್ ವ್ಯೂಹ್ ಹಾಸ್ಪಿಟಲ್ ಹಿಂಭಾಗದ ರಸ್ತೆಯಲ್ಲಿರುವ ಖಾಲಿ ನಿವೇಶನವನ್ನು ಸ್ವಚ್ಛವಾಗಿಟ್ಟುಕೊಳ್ಳಲು ಮಾಲೀಕರಿಗೆ ಸೂಚಿಸಲು ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಕೋರಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಘನತ್ಯಾಜ್ಯ ವಿಭಾಗ, ಬಿ.ಟಿ.ಎಂ. ಲೇಔಟ್ ವಿಭಾಗ**

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಗಳನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಸದಸ್ಯ ಕಾರ್ಯದರ್ಶಿ ಮತ್ತು ಸಭೆಯಲ್ಲಿ ಹಾಜರಾಗಿದ್ದ ಎಲ್ಲಾ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಪ್ರದೀಪ್ ಕುಮಾರ್ .ಆರ್)
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್–173 ಜಕ್ಕಸಂದ್ರ

(ಶ್ರೀ ಸಂಜೀವಕುಮಾರ್)
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್–173 ಜಕ್ಕಸಂದ್ರ